ಶ್ರೀ ಅಜೀಜ್ ಸೇಠ್ (ಸಾರಿಗೆ ಸಚಿವರು) :

ಅ) ಹೌದು.

ಆ) ನಿವೇಶನವನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ. ನಿವೇಶನದ ಬೆಲೆ ನಿಷ್ಕರ್ಷೆಯಾಗಿದೆ. ಆದರೆ ಇದಕ್ಕೆ ಜಿಲ್ಲಾ ಧಿಕಾರಿಗಳ ಆದೇಶವನ್ನು ನಿರೀಕ್ಷಿಸಲಾಗಿದೆ. ಇವರ ಆದೇಶ ದೊರೆತ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು.

ವಿಷಯ :– ಮಂಡ್ಯ ಜಿಲ್ಲೆಯಲ್ಲಿ ಬರ ಪರಿಹಾರದ ವೆಚ್ಚ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 694 (1039)

ಶ್ರೀ ಕೆ. ಎಂ. ಪುಟ್ಟು (ಕಿರುಗಾವಲು) :– ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಮಂಡ್ಯ ಜಿಲ್ಲೆಯಲ್ಲಿ ಯಾವ ಯಾವ ಪ್ರದೇಶಗಳಲ್ಲಿ ಬರಗಾಲ ಪೀಡಿತ ಪ್ರದೇಶಗಳೆಂದು ಗುರುತಿಸಲಾಗಿದೆ ?

ಆ) ಈ ಪ್ರದೇಶಗಳಲ್ಲಿ ಇದುವರೆಗೆ ಕೈಕೊಂಡಿರುವ ಬರ ಪರಿಹಾರ ಕಾಮಗಾರಿಗಳು ಯಾವುವು? (ವಿವರಗಳನ್ನು ನೀಡುವುದು)

ಇ) ಈ ಕಾಮಗಾರಿಗಳಿಗಾಗಿ ಇದುವರೆಗೆ ಮಾಡಿರತಕ್ಕಂಥ ವೆಚ್ಚವೆಷ್ಟು, ಈ ವರ್ಷದಲ್ಲಿ ಇದಕ್ಕಾಗಿ ಎಷ್ಟು ಹಣವನ್ನು ಮೀಸಲಾಗಿಡಲಾಗಿದೆ ಹಾಗೆ ಎಷ್ಟು ಹಣವನ್ನು ಇದಕ್ಕಾಗಿ ವ್ಯಯ ಮಾಡಲಾಗಿದೆ (ವಿವರ ಗಳನ್ನು ನೀಡುವುದು)

ಈ) ಯಾವ ತಾಲ್ಲೂಕುಗಳಲ್ಲಿ ಶಾಶ್ವತವಾಗಿ ಬರ ಪರಿಹಾರ ಕಾಮಗಾರಿಗಳನ್ನು ಮುಂದುವರಿಸಿ ಕೊಂಡು ಬರಲಾಗುತ್ತಿದೆ ?

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಕಂದಾಯ ಸಚಿವರು) :–

ಅ) ಮಂಡ್ಯ ಜಿಲ್ಲೆಯ ಏಳು ತಾಲ್ಲೂಕುಗಳ ಸುಮಾರು 961 ಗ್ರಾಮಗಳ ಪ್ರದೇಶಗಳಲ್ಲಿ ಅಭಾವ ಪರಿಸ್ಥಿತಿ ಇರುವುದಾಗಿ ಗುರುತಿಸಿದೆ.

ಆ) ಕುಡಿಯುವ ನೀರಿನ ಪೂರೈಕೆ, ಮೇವು ಪೂರೈಕೆ, ಉಚಿತ ಬಿತ್ತನೆ ಬೀಜಗಳ ವಿತರಣೆ, ಪೌಷ್ಟಿಕ ಆಹಾರ ಪೂರೈಕೆ ಮತ್ತು ಉದ್ಯೋಗ ಸೃಜನೆ ಕಾರ್ಯಕ್ರಮಗಳನ್ನು ಕೈಗೊಂಡಿದೆ.

ಇ)

ಪರಿಹಾರ ಕಾರ್ಯ	ವೆಚ್ಚ (ಲಕ್ಷ ರೂ.ಗಳಲ್ಲಿ)	ಬಿಡುಗಡೆ
1) ಕುಡಿಯುವ ನೀರಿನ ಪೂರೈಕೆ	15.24	27.00
2) ಉದ್ಯೋಗ ಸೃಜನೆ	24.40	67.00
3) ಮೇವು ಪೂರೈಕೆ	1.59	3·00
4) ಬಿತ್ತನೆ ಬೀಜ ವಿತರಣೆ	1.00	1.00
5) ಪೌಷ್ಟಿಕ ಆಹಾರ ಪೂರೈಕೆ	1.00	1·00
ಒಟ್ಟು :	43.23	99.00

ಈ) ಎಲ್ಲಾ ಏಳು ತಾಲ್ಲೂಕುಗಳಲ್ಲಿ ಪರಿಹಾರ ಕಾರ್ಯಕ್ರಮಗಳನ್ನು ಕೈಗೊಂಡಿದೆ.